# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖಾ ವತಿಯಿಂದ 2020ನೇ ಫೆಬ್ರವರಿ ಮಾಹೆಯಲ್ಲಿ ಸರ್ಕಾರಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜು ಶಿರಾ ಇಲ್ಲಿ ಐತಿಹಾಸಿಕ ದಾಖಾಲೆಗಳ ಛಾಯಾ ಚಿತ್ರ ಪ್ರದರ್ಶನ ಏರ್ಪಡಿಸುವ ಕುರಿತು.

**ಓದಲಾಗಿದೆ:** ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರ ಪತ್ರ ಸಂಖ್ಯೆ: ಕೆಎಸ್ಎ-13016/24/2019-ಹೆಚ್ಆರ್ಎಸ್(ಎನ್ಎಐ) ದಿ: 20.01.2020.

********

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರು 2019-20ನೇ ಸಾಲಿನ ಕ್ರಿಯಾಯೋಜನೆಯ ಕಾರ್ಯಕ್ರಮದಂತೆ ಇಲಾಖಾ ವತಿಯಿಂದ ಐತಿಹಾಸಿಕ ದಾಖಲೆಗಳು ಮತ್ತು ಛಾಯಾಚಿತ್ರ ಪ್ರದರ್ಶನವನ್ನು ಹಮ್ಮಿಕೊಳ್ಳಬೇಕಾಗಿದ್ದು, ಇದೇ ಫೆಬ್ರವರಿ ಮಾಹೆಯಲ್ಲಿ ಎರಡು ದಿನಗಳ ಕಾಲ ಸರ್ಕಾರಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜು ಶಿರಾ, ತುಮಕೂರು ಜಿಲ್ಲೆ ಇಲ್ಲಿ ಏರ್ಪಡಿಸಲು ಉದ್ದೇಶಿಸಲಾಗಿದ್ದು, ಸದರಿ ಕಾರ್ಯಕ್ರಮಕ್ಕೆ ರೂ.1.85 ಲಕ್ಷ ವೆಚ್ಚವಾಗುವುದೆಂದು ಅಂದಾಜಿಸಲಾಗಿದ್ದು, ಈ ಕಾರ್ಯಕ್ರಮಕ್ಕಾಗಿ ಸದರಿ ಅನುದಾನವನ್ನು ಉಪಯೋಗಿಸಿಕೊಳ್ಳಲು ಸರ್ಕಾರದ ಆಡಳಿತಾತ್ಮಕ ಆದೇಶ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಸಂವಾ 06 ರಾಪಸ ಆಕ 2020, ಬೆಂಗಳೂರು, ದಿನಾಂಕ: 29.01.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆಯ ವತಿಯಿಂದ ಐತಿಹಾಸಿಕ ದಾಖಲೆಗಳು ಮತ್ತು ಛಾಯಾಚಿತ್ರ ಪ್ರದರ್ಶನವನ್ನು ಫೆಬ್ರವರಿ ಮಾಹೆಯಲ್ಲಿ ಎರಡು ದಿನಗಳ ಕಾಲ ಸರ್ಕಾರಿ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪ್ರಥಮ ದರ್ಜೆ ಕಾಲೇಜು ಶಿರಾ, ತುಮಕೂರು ಜಿಲ್ಲೆ ಇಲ್ಲಿ ಏರ್ಪಡಿಸಲು ರೂ.1.85 ಲಕ್ಷ (ಒಂದು ಲಕ್ಷ ಎಂಬತ್ತೈದು ಸಾವಿರ ರೂಗಳು ಮಾತ್ರ)ಗಳನ್ನು ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಇವರಿಗೆ ಬಿಡುಗಡೆ ಮಾಡಲು ಸರ್ಕಾರದ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಸದರಿ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕಶೀರ್ಷಿಕೆ 2205-00-104-0-01-059 ಇತರೆ ಖರ್ಚುಗಳಡಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2020, ದಿನಾಂಕ: 13.01.2020 ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

(ವಿ.ಕೆ.ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ).

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಎ)ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.

....2

2. ಪ್ರಧಾನ ಮಹಾಲೇಖಪಾಲರು (ಎ &ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
3. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ. ಗೋಪುರ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ,
6. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಶಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ವಿಕಾಸಸೌಧ,
7. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.